## 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 569–2018** **ಸಿ. ಡಬ್ಲ್ಯುಃ 02**

**ಪಿ. ಡಬ್ಲ್ಯುಃ 01**

| | |
|---|---|
| ಸಾಕ್ಷಿದಾರರ ಹೆಸರು | ಮಹಮದ್ ಆಲಿ ಅಸ್ಗರ್ ಸೇಠ್ |
| ತಂದೆಯ ಹೆಸರು | ಮಹಮದ್ ಇಕ್ಬಾಲ್ ಸೇಠ್ |
| ವಯಸ್ಸು | 42 ವರ್ಷ |
| ಕೆಲಸ | ವ್ಯವಸಾಯ |
| ವಾಸ | ಊಟಿ, ತಮಿಳುನಾಡು. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 27-09-2023 |

### ಮುಖ್ಯ ವಿಚಾರಣೆಃ ಶ್ರೀ. ಎಪಿಪಿ ವಕೀಲರಿಂದಃ

ಚಾಸಾ–1 ನನ್ನ ಭಾಮೈದ, ಚಾಸಾ–3 ನನ್ನ ಹೆಂಡತಿ. ಚಾಸಾ–4 ರಿಂದ 6 ನನ್ನ ಸಂಬಂಧಿಕರು, ಚಾಸಾ–7 ಮತ್ತು 8 ನನ್ನ ಮಕ್ಕಳು. ನ್ಯಾಯಾಲಯದ ಮುಂದೆ ಇರುವ ಆರೋಪಿ ನನಗೆ ಗೊತ್ತಿಲ್ಲ. ಆರೋಪಿ ಯಾವ ರೀತಿ ವಾಹನವನ್ನು ಚಾಲನೆ ಮಾಡಿಕೊಂಡು ಬಂದು ನಾನು ಚಾಲನೆ ಮಾಡುತ್ತಿದ್ದ ವಾಹನಕ್ಕೆ ಡಿಕ್ಕಿಪಡಿಸಿದ ಎಂದು ನಾನು ಗಮನಿಸಲಿಲ್ಲ. ಅಪಘಾತದಿಂದ ಯಾರು ಯಾರಿಗೆ ಯಾವ ರೀತಿಯ ಗಾಯಗಳಾಯಿತು ಎಂದು ನನಗೆ ಗೊತ್ತಿಲ್ಲ. ಅಪಘಾತವು ಬೆಳಗಿನ ಜಾವ ಆಗಿರುವುದರಿಂದ ಆರೋಪಿ ಮತ್ತು ನಾನು ಯಾವ ರೀತಿ ವಾಹನ ಚಾಲನೆ ಮಾಡಿಕೊಂಡು ಹೋಗಿ ಅಪಘಾತಪಡಿಸಿಕೊಂಡೆವು ಎಂದು ನನಗೆ ಹೇಳಲು ಆಗುವುದಿಲ್ಲ. ಅಪಘಾತದಿಂದ ನನಗೆ ಹಾಗೂ ಚಾಸಾ–3 ರಿಂದ 8 ರವರಿಗೆ ಯಾವುದೇ ಗಾಯಗಳಾಗಿರುವುದಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಯಾವುದೇ ಹೇಳಿಕೆ ಪಡೆದಿಲ್ಲ. ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ. ಚಾಸಾ–1 ರವರ ಆರೋಪಿ ವಿರುದ್ಧ ದೂರು ನೀಡಿರುವ ವಿಚಾರ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**ಪಾಟೀ ಸವಾಲುಃ ಶ್ರೀ. ಎಪಿಪಿ ಯವರಿಂದ**

ದಿಃ18-09-2017 ರಂದು ಪೊಲೀಸರು ನನ್ನನ್ನು ವಿಚಾರಣೆ ಮಾಡಿ ಹೇಳಿಕೆ ಪಡೆದುಕೊಂಡರು ಎಂದರೆ ಸರಿಯಲ್ಲ. ದಿ.29-05-2017 ರಂದು ನನ್ನ ತಂದೆಗೆ ಆರೋಗ್ಯ ಸರಿ ಇಲ್ಲದ ಕಾರಣ ಆಸ್ಪತ್ರೆಗೆ ಸೇರಿಸಿ ಮರಣಹೊಂದಿದ್ದು ನಂತರ ಅವರ ಮೃತ ದೇಹವನ್ನು ನಮ್ಮ ಸ್ವಂತ ಊರಾದ ಕಣ್ಣೂರಿಗೆ ಆಂಬ್ಯೂಲೆನ್ಸ್ ನಲ್ಲಿ ಕಳುಹಿಸಿಕೊಟ್ಟಿದ್ದು ನಾನು ಮತ್ತು ಚಾಸಾ-3 ರಿಂದ 8 ರವರು ನನ್ನ ಬಾಬ್ತು ಕೆಎ-05-ಎಂಆರ್-9564 ಕಾರಿನಲ್ಲಿ ನಾನು ಚಾಲನೆ ಮಾಡಿಕೊಂಡು ಹೋಗುತ್ತಿದ್ದಾಗ ದಿ.30-05-2017 ರಂದು ಬೆಳಗಿನ ಜಾವ 5.45 ಗಂಟೆ ಸಮಯದಲ್ಲಿ ನಂಜನಗೂಡು ಪಟ್ಟಣದ ಹುಲ್ಲಹಳ್ಳಿ ಸರ್ಕಲ್ ಹತ್ತಿರ ಗುಂಡ್ಲುಪೇಟೆ ಕಡೆಗೆ ಹೋಗುತ್ತಿದ್ದಾಗ ಆರೋಪಿಯು ಕೆಎ-10-ಎಫ್-0014 ಬಸ್ಸನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಯಾವುದೇ ಸೂಚನೆ ನೀಡಿದೇ ಬಲಭಾಗಕ್ಕೆ ತಿರುಗಿಸಿಕೊಂಡಾಗ ನಾನು ಚಾಲನೆ ಮಾಡಿದ ಕಾರಿಗೆ ಡಿಕ್ಕಿಪಡಿಸಿದ ಎಂದರೆ ಸರಿಯಲ್ಲ. ನನಗೆ ಅಪಘಾತದಿಂದ ಹಣೆಗೆ ಹಾಗೂ ಮೂಗಿನ ಮೇಲೆ ಹಾಗೂ ಚಾಸಾ-3 ರಿಂದ 8 ರವರಿಗೂ ಅಪಘಾತದಿಂದ ಗಾಯಗಳಾಗಿರುತ್ತವೆ ಎಂದರೆ ಸರಿಯಲ್ಲ. ಅಪಘಾತದ ಬಗ್ಗೆ ನನ್ನ ಮಗ ಚಾಸಾ-7 ರವರು ಚಾಸಾ-1 ರವರಿಗೆ ಮಾಹಿತಿ ತಿಳಿಸಿ ನಾವು ಗಾಯಗೊಂಡ ನಂತರ ನಂಜನಗೂಡಿನ ಸರ್ಕಾರಿ ಆಸ್ಪತ್ರೆಗೆ ಹೋಗಿ ನಂತರ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರು ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತೇವೆ ಎಂದರೆ ಸರಿಯಲ್ಲ. ಚಾಸಾ-1 ರವರು ಆಸ್ಪತ್ರೆಗೆ ಬಂದು ನಮ್ಮನ್ನು ವಿಚಾರಿಸಿ ಆರೋಪಿತನ ವಿರುದ್ಧ ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿ ಹೆಸರು ಹರೀಶ ಎಂದು ಗೊತ್ತಾಯಿತು ಎಂದರೆ ಸರಿಯಲ್ಲ. ದಿ.29-05-2017__________________________ಮತ್ತೆ ನೋಡಿದರೆ ಗುರುತಿಸುತ್ತೇನೆ ಎಂದು ಮೇಲೆ ಓದಿ ಹೇಳಲಾದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗೆಳೆದ ಹೇಳಿಕೆ ಭಾಗವನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರಂತೆ ಪೊಲೀಸರ ಮುಂದ ಹೇಳಿಕೆ ನೀಡಿದ್ದರು ಹೇಳಿಲ್ಲ ನೀಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

**ಓ . ಹೇ. ಕೇ. ಸರಿ. ಇದೆ**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**